2	2013	320.52	303.48
3	2014	389.11	331.65
	ಒಟ್ಟು	**932.85**	**855.72**

* ಜಿಲ್ಲಾವಾರು ಅನುದಾನ ನಿಗದಿಪಡಿಸಿರುವುದಿಲ್ಲ.

ಜಿಲ್ಲಾ ಪಂಚಯತ್ ರಸ್ತೆಗಳ ದುರಸ್ತಿ

2451(2810); ಶ್ರೀ ದೇವೇಗೌಡ ಬಿ.ಟಿ. (ಚಾಮುಂಡೇಶ್ವರಿ)

ಅ) ಮೈಸೂರು ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಜಿಲ್ಲಾ ಪಂಚಾಯತ್ ರಸ್ತೆಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ದುರಸ್ತಿ ಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ಎಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿಯ ಕೆಲವು ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ)

- ಪ್ರತಿ ವರ್ಷ ಗ್ರಾಮೀಣ ರಸ್ತೆಗಳ ನಿರ್ವಹಣೆ/ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮ / ಲೆಕ್ಕ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿಗಳಿಗೆ ಅನುದಾನ ಒದಗಿಸಲಾಗುತ್ತಿದೆ.

- ಅದರಂತೆ ಜಿಲ್ಲಾ ಪಂಚಾಯತಿಗೆ ಲಭ್ಯವಾಗುವ ಅನುದಾನಕ್ಕೆ ಅನುಗುಣವಾಗಿ ಜಿಲ್ಲಾ ಪಂಚಾಯತಿಗಳಲ್ಲಿ ಕ್ರಿಯಾ ಯೋಜನೆ ರೂಪಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

- ಪ್ರಸಕ್ತ ಸಾಲಿನಲ್ಲಿ ಚಾಮುಂಡೇಶ್ವರಿ ಮತಕ್ಷೇತ್ರಕ್ಕೆ ಗ್ರಾಮೀಣ ರಸ್ತೆಗಳ ನಿರ್ವಹಣೆ/ದುರಸ್ತಿಗಾಗಿ ವಿವಿಧ ಯೋಜನೆಗಳಡಿ ಒದಗಿಸಿದ ಅನುದಾನದ ವಿವರ ಕೆಳಕಂಡಂತಿದೆ.

ಕ್ರ.ಸಂ.	ಯೋಜನೆ/ಲೆಕ್ಕಶೀರ್ಷಿಕೆ	ಒದಗಿಸಿದ ಅನುದಾನ (ರೂ. ಲಕ್ಷಗಳಲ್ಲಿ)
1	ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ–3054	36.03
2	ನಿರ್ವಹಣಾ ಅನುದಾನ–3054 (ಟಾಸ್ಕ್‌ಫೋರ್ಸ್)	45.00

ಕಲಬುರಗಿ ಜಿಲ್ಲಾ ಪಂಚಾಯತಿಗೆ ಬಿಡುಗಡೆಯಾದ ಅನುದಾನ

2452(2750); ಡಾ॥ ಅಜಯ್ ಸಿಂಗ್ (ಜೇವರ್ಗಿ)

ಅ) 2014–15ನೇ ಸಾಲಿಗೆ ಗುಲಬರ್ಗಾ ಜಿಲ್ಲಾ ಪಂಚಾಯತಿಗೆ ಯೋಜನೆ ಮತ್ತು ಯೋಜನೇತರ ಅಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು (ವಿವರ ನೀಡುವುದು)